# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/100/2015-16 ದಿನಾಂಕ:21.10.2016

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| ಶ್ರೀ ಕೆ.ನಾಗರಾಜ ತಂದೆ ಕೆ.ನೀಲಕಂಠಪ್ಪ<br>ಗ್ರಾಮ:-ಹರೇಗೊಂಡನಹಳ್ಳಿ<br>ತಾ:-ಹೆಚ್.ಬಿ.ಹಳ್ಳಿ | ಶ್ರೀ ಎಂ.ಬಿ.ಭರಮನಗೌಡ ತಂದೆ ಎಂ.ಬಿ.ಕೊಟ್ರೇಶಪ್ಪ<br>ಗ್ರಾಮ:-ಹರೇಗೊಂಡನಹಳ್ಳಿ ತಾ:-ಹೆಚ್.ಬಿ.ಹಳ್ಳಿ |

**ವಿವಾದಿತ ಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮ | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಹರೇಗೊಂಡನಹಳ್ಳಿ | 186/3 | 1-00 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಹರೇಗೊಂಡನಹಳ್ಳಿ ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಹರೇಗೊಂಡನಹಳ್ಳಿ ಗ್ರಾಮದ ನಿವಾಸಿಯಾದ ಕೆ.ನಾಗರಾಜ ತಂದೆ ಕೆ.ನೀಲಕಂಠಪ್ಪ ಇವರು ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಹರೇಗೊಂಡನಹಳ್ಳಿ ಗ್ರಾಮದ ಎಂ.ಬಿ.ಕೊಟ್ರೇಶಪ್ಪ ಇವರಿಂದ ನೋಂದಾಯಿತ ಕ್ರಯ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-03664-2015-2016 ದಿನಾಂಕ:20.01.2016 ರಂದು ಮೊತ್ತ ರೂ:98,000/-ಕ್ಕೆ ಖರೀದಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21ರ ನೋಟೀಸನ್ನು ದಿನಾಂಕ:21.01.2016 ರಂದು ಜಾರಿಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿನಾಂಕ:02.02.2016 ರಂದು ಎಂ.ಬಿ.ಭರಮನಗೌಡ ತಂದೆ ಎಂ.ಬಿ.ಕೊಟ್ರೇಶಪ್ಪ ಇವರು ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಕಾರಣ, ಎಂ.ಆರ್.ನಂ.28/15-16 ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ಇವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿನಾಂಕ:03.05.2016ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:03.05.2016 ರಿಂದ 20.10.2016 ರವರೆಗೆ ವಿಚಾರಣೆಯನ್ನು ಮಾಡಲಾಯಿತು. ಉಭಯರು ಹಾಜರಾಗಿರುತ್ತಾರೆ. ಅರ್ಜಿದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನು ನೋಂದಾಯಿತ ಕ್ರಯ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ. ತಕರಾರುದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನಿನಲ್ಲಿ ನಮ್ಮಗಳ ಪಾಲು ಇರುತ್ತದೆ. ಎಂದು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಪ್ರಕರಣದಲ್ಲಿ ದಿನಾಂಕ:20.10.2016 ರಂದು ಉಭಯರು ಹಾಜರಾಗಿರುತ್ತಾರೆ. ತಕರಾರುದಾರರ ಪರ ತಂದೆ ಅಂದರೆ ಪಟ್ಟಾದಾರ ಹಾಜರಾಗಿ ಹೇಳುವಂತೆ; ಕ್ರಯದಾರರ ಹೆಸರಿಗೆ ಕ್ರಯ ಪ್ರಕಾರ ಹಕ್ಕು ಬದಲಾವಣೆ ಮಾಡಲು ನನ್ನ ಯಾವುದೇ ತಂಟೆ ತಕರಾರು ಇಲ್ಲವೆಂದು ಮೌಖಿಕವಾಗಿ ಹೇಳಿಕೆ ನೀಡಿರುತ್ತಾರೆ.

ಪುಟ-2ಕ್ಕೆ..

ಪ್ರಕರಣದಲ್ಲಿ ಅರ್ಜಿದಾರರು ಮತ್ತು ತಕರಾರುದಾರು ನೀಡಿದ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲನೆ ಮಾಡಲಾಗಿ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಹರೇಗೊಂಡನಹಳ್ಳಿ ಗ್ರಾಮದ ಕೆ.ನಾಗರಾಜ ತಂದೆ ಕೆ.ನೀಲಕಂಠಪ್ಪ ಇವರು ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಹರೇಗೊಂಡನಹಳ್ಳಿ ಗ್ರಾಮದ ಎಂ.ಬಿ.ಕೊಟ್ರೇಶಪ್ಪ ಇವರಿಂದ ನೋಂದಾಯಿತ ಕ್ರಯ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-03664-2015-2016 ದಿನಾಂಕ:20.01.2016 ರಂದು ಮೊತ್ತ ರೂ:98,000/-ಕ್ಕೆ ಖರೀದಿಸಿರುವುದು ಕಂಡುಬಂದಿರುತ್ತದೆ. ನೋಂದಾಯಿತ ದಸ್ತಾವೇಜುಗಳನ್ನು ಕಂದಾಯ ಅಧಿಕಾರಿಗಳಿಗೆ ಮ್ಯುಟೇಷನ್ ಬದಲಾವಣೆಗೆ ಸಲ್ಲಿಸಿದಲ್ಲಿ, ಕಂದಾಯ ಅಧಿಕಾರಿಗಳು ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 128 ಮತ್ತು 129 ರನ್ವಯ ಅಂತಹ ನೋಂದಾಯಿತ ದಸ್ತಾವೇಜಿಗೆ ಚಾಲನೆ ನೀಡತಕ್ಕದ್ದು. ಕಂದಾಯ ಅಧಿಕಾರಿಗಳಿಗೆ ಅಂತಹ ದಸ್ತಾವೇಜಿನ ನೈಜತೆಯನ್ನು ನಿರ್ಣಯಿಸುವ ಅಧಿಕಾರ ಇರುವುದಿಲ್ಲದ ಪ್ರಯುಕ್ತ, ನೋಂದಾಯಿತ ಕ್ರಯ ಪ್ರಕಾರ ಕ್ರಯದಾರರ ಹೆಸರಿಗೆ ಹಕ್ಕುಬದಲಾವಣೆ ಮಾಡಲು ಈ ಕೆಳಕಂಡಂತೆ ಆದೇಶ;

## -:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಹಾಗೂ ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 128 ಮತ್ತು 129 ರನ್ವಯ ಮತ್ತು ಎಂ.ಆರ್.ನಂ.28/2015-16 ರ ಪ್ರಕಾರ, ಹರೇಗೊಂಡನಹಳ್ಳಿ ಗ್ರಾಮದ ಸ.ನಂ. 186/3 ವಿಸ್ತೀರ್ಣ 1-00 ಎಕರೆ ಜಮೀನು ಕ್ರಯದಾರರಾದ ಕೆ.ನಾಗರಾಜ ತಂದೆ ಕೆ.ನೀಲಕಂಠಪ್ಪ ಇವರ ಹೆಸರಿಗೆ ನೋಂದಾಯಿತ ಕ್ರಯ ಪ್ರಕಾರ ಹಕ್ಕುಬದಲಾವಣೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:21.10.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

(Sd/-) 25/10/16

[ವಿ.ಹೆಚ್.ಮಲ್ಲಿಕಾರ್ಜುನ] 21/10/16
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ,ಕೋಗಳಿ

ಉಪ ತಹಶೀಲ್ದಾರರು,
ನಾಡ ಕಛೇರಿ, ಕೋಗಳಿ

8/11/16

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿ ಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.